1956ರ ಕಂಪನಿಗಳ ಕಾಯ್ದೆಯ 619 ಎ ಪ್ರಕರಣದ ಮೇರೆಗೆ;

2. ದಿನಾಂಕ 31.3.97ಕ್ಕೆ ಅಂತ್ಯಗೊಳ್ಳುವ ಕರ್ನಾಟಕ ಮಾಂಸ ಮತ್ತು ಕೋಳಿ ಮಾರಾಟ ನಿಗಮ ನಿಯಮಿತದ 23ನೇ ವಾರ್ಷಿಕ ವರದಿ ಮತ್ತು ಲೆಕ್ಕ ಪತ್ರಗಳನ್ನು ಮಂಡಿಸುತ್ತೇನೆ.

4) ವರದಿಗಳನ್ನು ಒಪ್ಪಿಸುವುದು

ಶ್ರೀ ವಿ. ಎಸ್. ಕೌಜಲಗಿ (ಅಧ್ಯಕ್ಷರು, ಸಾರ್ವಜನಿಕ ಲೆಕ್ಕ ಪತ್ರ ಸಮಿತಿ ಅಧ್ಯಕ್ಷರು) : ಮಾನ್ಯ ಅಧ್ಯಕ್ಷರೆ, ಸಾರ್ವಜನಿಕ ಲೆಕ್ಕ ಪತ್ರಗಳ ಸಮಿತಿ ಅಧ್ಯಕ್ಷನಾದ ನಾನು ವಸತಿ ಮತ್ತು ನಗರಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದ ಸಮಿತಿಯ 32ನೇ ಮತ್ತು 33ನೇ ವರದಿಗಳನ್ನು ಈ ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು (ಶ್ರೀ ಬಸವರಾಜ ಪಾಟೀಲ್ ಅಟ್ಟೂರ್‌ರವರ ಪರವಾಗಿ): ಸಾರ್ವಜನಿಕ ಉದ್ದಿಮೆ ಸಮಿತಿಯ 75, 76 ಹಾಗೂ 77ನೇ ವರದಿಯನ್ನು ಸಭೆಯ ಮುಂದೆ ಇಡುತ್ತಿದ್ದೇನೆ.

(ವರದಿಗಳನ್ನು ಮಂಡಿಸಲಾಯಿತು)

5) ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು :

ಅಧ್ಯಕ್ಷರು : ಈಗ 17 ಜನ ಮಾನ್ಯ ಸದಸ್ಯರು ಶೂನ್ಯ ವೇಳೆಯ ವಿಚಾರವನ್ನು ಪ್ರಸ್ತಾಪ ಮಾಡಲು ಅನುಮತಿ ಕೋರಿದ್ದಾರೆ. ಒಂದೊಂದು ನಿಮಿಷ ಚರ್ಚೆಗೆ ಅವಕಾಶ ಇಲ್ಲದಂತೆ ಪ್ರಸ್ತಾಪ ಮಾಡಿದರೆ ಅನುಕೂಲ. ಏಕೆಂದರೆ ನಾಳೆ ಮಾನ್ಯ ಉಪ ಮುಖ್ಯಮಂತ್ರಿಗಳು ಉತ್ತರ ಕೊಡುವವರು ಇದ್ದಾರೆ. ಬಜೆಟ್ ಮೇಲೆ ಚರ್ಚೆ ಮಾಡುವುದಕ್ಕೆ ಹೆಚ್ಚು ಸಮಯ ಕೊಡಬೇಕಾಗುತ್ತದೆ. ಆದ್ದರಿಂದ ಮಾನ್ಯ ಸದಸ್ಯರಲ್ಲಿ ವಿನಂತಿ ಮಾಡಿಕೊಳ್ಳುತ್ತೇನೆ.

ಶ್ರೀ ಕೆ. ಜಯರಾಮಶೆಟ್ಟಿ : ನಾನು ಮೊನ್ನೆ ಸೋಮವಾರ ಶೂನ್ಯ ವೇಳೆಯಲ್ಲಿನ ವಿಚಾರವನ್ನು ಪ್ರಸ್ತಾಪ ಮಾಡಿದ್ದಕ್ಕೆ ಮಾನ್ಯ ಮಂತ್ರಿಗಳು ಉತ್ತರ ಕೊಡುತ್ತೇನೆಂದು ಹೇಳಿದ್ದರು. ಕೊಡಲಿಲ್ಲ. ಕಳೆದ 12ನೇ ತಾರೀಖಿನ ನನ್ನ ಪ್ರಶ್ನೆಗೆ ತಾವು ಉತ್ತರ ತರಿಸಿಕೊಡುತ್ತೇನೆಂದು ಹೇಳಿದ್ದೀರಿ. ಉತ್ತರ ಕೊಡಿಸಲಿಲ್ಲ. ಗಂಭೀರವಾಗಿ ಪರಿಶೀಲನೆ ಆಗಬೇಕು. ಐದು ತಿಂಗಳು ಆರು ತಿಂಗಳಾದ ನಂತರ ಉತ್ತರ ಬಂದರೆ ಏನು ಪ್ರಯೋಜನ ಅಧ್ಯಕ್ಷರೆ; ತಾವು ದಯವಿಟ್ಟು ಇದರ ಬಗ್ಗೆ ವ್ಯವಸ್ಥೆ ಮಾಡಬೇಕು.

ಶ್ರೀ ಅರಗ ಜ್ಞಾನೇಂದ್ರ : ನಾನು ನಿನ್ನೆ ಶೂನ್ಯ ವೇಳೆಯ ವಿಚಾರ ಪ್ರಸ್ತಾಪ ಮಾಡಿದ್ದೆ. ಇವತ್ತು ಉತ್ತರ ಕೊಡುತ್ತೇನೆಂದು ಹೇಳಿದ್ದರು.

ಅಧ್ಯಕ್ಷರು : ಶೂನ್ಯ ವೇಳೆಯ ವಿಚಾರದಲ್ಲಿ ಅನೇಕ ಮಾನ್ಯ ಸ್ನೇಹಿತರುಗಳು ಏನು ಮಾಡುತ್ತಾರೆಂದರೆ ಆಗಿಂದಾಗ್ಗೆ ತಂದು ಕೊಡುತ್ತಾರೆ. ಮೊದಲೇ ನೋಟೀಸ್ ಕೊಟ್ಟಿರುವುದಿಲ್ಲ. ಈಗ ಕೆಲವರು ಇದ್ದಕ್ಕಿದ್ದ ಹಾಗೆ ಕೊಟ್ಟಿದ್ದಾರೆ. ನಾನು ಸದನದಲ್ಲಿ ಪ್ರಸ್ತಾಪ ಮಾಡುವುದಕ್ಕೆ ಅವಕಾಶ ಇರಲಿ ಎಂದು ಹೇಳಿ ಅವಕಾಶ ಕೊಟ್ಟಿರುತ್ತೇನೆ. ಮೊದಲೇ ನೋಟೀಸ್ ಕೊಟ್ಟಿದ್ದಾರೆ ಅವರು ಉತ್ತರ ತರಿಸಿಕೊಂಡು ಹೇಳುತ್ತಾರೆ.

ಶ್ರೀ ಅರಗ ಜ್ಞಾನೇಂದ್ರ : ನಾನು ನಾಲ್ಕು ದಿವಸ ಮೊದಲೇ ಕೊಟ್ಟಿದ್ದೆ.